# ಕನ್ನಡ ಪೋಸ್ಟ್

KANNADA POST

ಸಂಪಾದಕ : ಮಂಜು ಬನವಾಸೆ

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 177 | Pages. 2 | Date: 23-06-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 177 - ಪುಟಗಳು : 2 | 23-06-2026 ಮಂಗಳವಾರ | Ph: 8762954248 | ದರ : ₹1


# ಬಗರ್ ಹುಕುಂ ಭ್ರಷ್ಟಾಚಾರಿಗಳಿಗೆ ಶಿಕ್ಷೆಯಾಗಲಿ

## ಸಮಿತಿ ಅಧ್ಯಕ್ಷ ಶಾಸಕರೇ ಆದ್ದರಿಂದ ಹೊಣೆ ಹೊರಲಿ | ದೂರುದಾರ ರಾಜಣ್ಣ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಡವರು, ಹಿಂದುಳಿದ ವರ್ಗದವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಜಾರಿಯಾಗಿರುವ ಬಗರ್ ಹುಕುಂ ಯೋಜನೆಯನ್ನು ದುರ್ಬಳಕೆ ಮಾಡಿಕೊಂಡಿರುವ ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಹಾಗೂ ಅಧಿಕಾರಿಗಳಿಗೆ ಕಾನೂನು ಪ್ರಕಾರ ಶಿಕ್ಷೆಯಾಗಬೇಕು ಎಂದು ಕೋಲಾರ ಮೂಲದ ಆರ್‌ಟಿಐ ಕಾರ್ಯಕರ್ತ ಕೆ.ಸಿ.ರಾಜಣ್ಣ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಬೇಲೂರು ತಾಲ್ಲೂಕಿನಲ್ಲಿ 2750 ಎಕರೆ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಲಾಗಿದೆ. ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರ ಅವಧಿಯಲ್ಲೇ ಅಧಿಕ ಪ್ರಮಾಣದ ಅಕ್ರಮ ನಡೆದಿದೆ.

ಈ ಬಗ್ಗೆ 2023ರ ಜ. 23ರಂದು ನಾನು ಬೇಲೂರು ಠಾಣೆಗೆ ದೂರು ನೀಡಿದ್ದೆ. ಸ್ಥಳೀಯ ಪೊಲೀಸರು ಎಫ್‌ಐಆರ್ ದಾಖಲಿಸದ ಹಿನ್ನಲೆಯಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ದೂರು ನೀಡಿದ್ದೆ. ತಮ್ಮ ವಿರುದ್ಧ ದಾಖಲಾದ ಪ್ರಕರಣ ರದ್ದುಪಡಿಸಬೇಕೆಂದು ಕೆ.ಎಸ್.ಲಿಂಗೇಶ್ ಮೇಲ್ಮನವಿ ಸಲ್ಲಿಸಿದ್ದರಾದರೂ ನ್ಯಾಯಾಲಯ ಅದನ್ನು ರದ್ದುಪಡಿಸಿ ಕ್ರಮ ಕೈಗೊಂಡಿದೆ.

ಮೂರು ವರ್ಷಗಳ ಬಳಿಕ ಮಾಜಿ ಶಾಸಕ ಸೇರಿ 16 ಜನರನ್ನು ಸಿಐಡಿ ಬಂಧಿಸಿದೆ. ಬಂಧಿತರಲ್ಲಿ ತಹಶೀಲ್ದಾರ್, ಕಂದಾಯ ನಿರೀಕ್ಷಕರು ಹಾಗೂ ಇತರ ಅಧಿಕಾರಿಗಳಿದ್ದಾರೆ ಎಂದರು.

ಇದೊಂದು ದೊಡ್ಡ ಹಗರಣ, ಬರೋಬ್ಬರಿ 2750 ಎಕರೆ ಜಮೀನನ್ನು ನಕಲಿ ದಾಖಲೆ ಸೃಷ್ಟಿ ಮಂಜೂರು ಮಾಡಲಾಗಿದೆ. ಬೆಂಗಳೂರು ಸೇರಿ ಹಲವು ಜಿಲ್ಲೆಯವರಿಗೆ ಹಂಚಿಕೆ ಮಾಡಲಾಗಿದೆ. ಅಪ್ರಾಪ್ತರು, ಮರಣ ಹೊಂದಿದವರ ಹೆಸರಿಗೆ ಭೂಮಿ ನೀಡಲಾಗಿದೆ.

ಬಗರ್ ಹುಕುಂ ಅಡಿಯಲ್ಲಿ ಭೂಮಿ ಮಂಜೂರು ಮಾಡಲು ನಿಯಮಗಳಿವೆ. ಸಮಿತಿ ಅಧ್ಯಕ್ಷರು ಶಾಸಕರೇ ಆಗಿರುತ್ತಾರೆ. ದಿ. ರುದ್ರೇಶ್ ಗೌಡ ಅವರ ಆಡಳಿತಾವಧಿಯಲ್ಲೂ ಅಕ್ರಮ ಮಂಜೂರಾತಿ ಆಗಿದೆ ಎಂದು ಆರೋಪಿಸಿದರು. ಕೆಲವೇ ದಿನಗಳಲ್ಲಿ ಸಿಐಡಿ 42ನೇ ವಿಶೇಷ ಕೋರ್ಟ್‌ಗೆ ದೋಷಾರೋಪಣಾ ಪಟ್ಟಿ ಸಲ್ಲಿಸಲಿದ್ದು, ವಿಚಾರಣೆ ನಂತರ ಆರೋಪಿಗಳಿಗೆ ಶಿಕ್ಷೆ ಆಗುವ ವಿಶ್ವಾಸವಿದೆ.

2016 ರಿಂದ 2022ರ ನಡುವೆ ಹಗರಣ ನಡೆದಿದೆ. ಬಗರ್ ಹುಕುಂ ಯೋಜನೆಯಡಿ ಸುಮಾರು 2000 ಸಾವಿರಕ್ಕೂ ಅಧಿಕ ಅರ್ಜಿ ಸಲ್ಲಿಕೆ ಆಗಿದ್ದವು. ಈ ಪೈಕಿ 1430 ಅರ್ಜಿಗಳು ನಕಲಿ ಆಗಿದ್ದು, ಅಷ್ಟೂ ಮಂದಿಗೆ ಭೂಮಿ ಮಂಜೂರಾಗಿದೆ ಎಂದರು.

ಸಕಲೇಶಪುರ ಉಪ ವಿಭಾಗಾಧಿಯಾಗಿಯಾಗಿದ್ದ ಪ್ರತೀಕ್ ಬಯಾಲ್ ಎಂಬುವರು ವಿಸ್ತೃತ ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ. ಅದರಲ್ಲಿ ಎಷ್ಟೋ ಪ್ರಕರಣಗಳಲ್ಲಿ ನೈಜತೆ ಇಲ್ಲ, ನಿಯಮ ಗಾಳಿಗೆ ತೂರಲಾಗಿದೆ ಎಂದಿದ್ದರು. ಇಷ್ಟೆಲ್ಲ ಲೋಪದೋಷಗಳಿಗೆ ಅಂದು ಶಾಸಕರಾಗಿದ್ದ ಕೆ.ಎಸ್. ಲಿಂಗೇಶ್ ಅವರೇ ನೇರಹೊಣೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀಕಾಂತ್ ಇದ್ದರು.

## ಕೆ.ಎಸ್.ಲಿಂಗೇಶ್ ಅವರಿಂದ ತಪ್ಪಾಗಿಲ್ಲ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬಗರ್ ಹುಕುಂ ಯೋಜನೆ ಅನರ್ಹರಿಗೆ ಮಂಜೂರಾಗಿರುವುದಕ್ಕೆ ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರನ್ನು ಹೊಣೆಗಾರರನ್ನಾಗಿಸುವುದು ಸರಿಯಲ್ಲ ಎಂದು ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಳ್ಳೂರು ಸ್ವಾಮಿಗೌಡ ಹೇಳಿದರು.

ಬೇಲೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2000 ಕೋಟಿ ರೂ. ಹಗರಣ ನಡೆದಿದೆ ಎಂಬ ಆರೋಪಗಳು ಸತ್ಯಕ್ಕೆ ದೂರವಾದುದು. ಈ ಬಗ್ಗೆ ಸಮಗ್ರ ತನಿಖೆ ನಡೆಸಿ ಸತ್ಯಾಸತ್ಯತೆ ಹೊರತರಬೇಕೆಂದು ಆಗ್ರಹಿಸಿದರು.

ಸಾಮಾಜಿಕ ಜಾಲತಾಣ ಹಾಗೂ ಕೆಲವು ಮಾಧ್ಯಮಗಳಲ್ಲಿ ಲಿಂಗೇಶ್ ಅವರ ತೇಜೋವಧೆ ನಡೆಯುತ್ತಿದೆ. ಅದರಿಂದ ಸಾವಿರಾರು ರೈತರ ಗೌರವಕ್ಕೆ ಧಕ್ಕೆಯಾಗುತ್ತಿದೆ. ಕೆಲವು ನ್ಯೂನತೆಗಳಿಗಾಗಿ ಶೇ.99ರಷ್ಟು ಪ್ರಾಮಾಣಿಕ ರೈತರನ್ನು ತಪ್ಪಿತಸ್ಥರಂತೆ ಬಿಂಬಿಸುವುದು ಸರಿಯಲ್ಲ. ಈ ಪ್ರಕರಣದಲ್ಲಿ ಸುಮಾರು ಎರಡೂವರೆ ಸಾವಿರ ರೈತರ ಭವಿಷ್ಯ ಅಡಗಿದೆ. ಲಿಂಗೇಶ್ ಅವರು ತಮ್ಮ ಕುಟುಂಬದವರು ಅಥವಾ ಬಂಧುಗಳಿಗಾಗಿ ಜಮೀನು ಮಂಜೂರು ಮಾಡಿಕೊಂಡಿಲ್ಲ. ಬದಲಾಗಿ ಅರ್ಹ ಬಡವರು, ಶೋಷಿತ ವರ್ಗಗಳಿಗೆ ಭೂಮಿ ದೊರಕಿಸುವ ನಿಟ್ಟಿನಲ್ಲಿ ಕೆಲಸ ಮಾಡಿದ್ದಾರೆ.

ಪ್ರಕರಣ ಕುರಿತು ಪೊಲೀಸ್ ಬದಲು ಕಂದಾಯ ಇಲಾಖೆಯ ತಜ್ಞರು ಹಾಗೂ ನಿವೃತ್ತ ಸಹಾಯಕ ಆಯುಕ್ತರ ನೇತೃತ್ವದಲ್ಲಿ ಸಮಿತಿ ರಚಿಸಿ ದಾಖಲೆಗಳನ್ನು ಪರಿಶೀಲಿಸಿದರೆ ನಿಜಾಂಶ ಹೊರಬರಲಿದೆ ಎಂದು ಅಭಿಪ್ರಾಯಪಟ್ಟರು. ರೈತ ಸಂಘದ ಜಿಲ್ಲಾ ಗೌರವಾಧ್ಯಕ್ಷ ಮಲ್ಲಿಕಾರ್ಜುನ್, ಉಪಾಧ್ಯಕ್ಷ ಧರ್ಮೇಗೌಡ, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್, ಕಾರ್ಯದರ್ಶಿ ಸಚಿನ್ ಇದ್ದರು.

## ಕೆಲವರಿಗೆ ಮೈತ್ರಿ ಇಷ್ಟವಿಲ್ಲ ಶಾಸಕ ಸ್ವರೂಪ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೆಲವರಿಗೆ ಬಿಜೆಪಿ-ಜೆಡಿಸ್ ಮೈತ್ರಿ ಇಷ್ಟವಿಲ್ಲ. ಆದ್ದರಿಂದ ಏನೇನೋ ಮಾತನಾಡುತ್ತಿದ್ದಾರೆ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಮೈತ್ರಿ ಕುರಿತು ನಗರದ ನಂದಿನಿ ಬಡಾವಣೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ 1.30 ಕೋ.ರೂ. ವೆಚ್ಚದ ಕಾಂಕ್ರಿಟ್ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಸೋಮವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಚರ್ಚೆ ಮಾಡುವುದಿಲ್ಲ. ಕೆಲವರಿಗೆ ಮೈತ್ರಿ ಇಷ್ಟವಿಲ್ಲ. ಮೈತ್ರಿ ಮುಂದುವರಿದರೆ ಟಿಕೆಟ್ ಕೈ ತಪ್ಪಲಿದೆ ಎಂಬ ಕಾರಣಕ್ಕೆ ವಿರೋಧಿಸುತ್ತಿದ್ದಾರೆ. ಅದರ ಬಗ್ಗೆ

ಮಾತನಾಡುವಷ್ಟು ದೊಡ್ಡವನಲ್ಲ, ನಮ್ಮ ಪಕ್ಷದ ನಾಯಕರು ಹೇಳಿದಂತೆ ಕೇಳುವೆ, ಮೈತ್ರಿ ಧರ್ಮ ಪಾಲನೆ ಮಾಡುವೆ ಎಂದು ಉತ್ತರಿಸಿದರು.

ನಾನು ಬೆಂಗಳೂರಿನಲ್ಲಿ ಮನೆ ಮಾಡಿಲ್ಲ, ಹಾಸನದಲ್ಲೇ ಇರುವೆ. ಗೃಹ ಕಚೇರಿಯಲ್ಲಿ ಸಾರ್ವಜನಿಕರಿಗೆ ಯಾವಾಗಲೂ ಸಿಗುತ್ತೇನೆ ಎಂದು ಮಾಜಿ ಶಾಸಕ ಪ್ರೀತಂ ಗೌಡರಿಗೆ ತಿರುಗೇಟು ನೀಡಿದರು.

ಸಾರ್ವಜನಿಕರ ಸಮಸ್ಯೆ ಬಗೆಹರಿಸಲು ಅವರು ಕಚೇರಿಗೆ ಬರುವುದಾದರೆ ಬರಲಿ ಬೇಡ ಎನ್ನಲು ಆಗುವುದಿಲ್ಲ. ಮಹಾನಗರ ಪಾಲಿಕೆ, ಪ್ರಜಾಸೌಧದಲ್ಲಿ ಕಚೇರಿಯಲ್ಲಿ ನಿತ್ಯ ಇದ್ದು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದೇನೆ. ನಾನೂ ಕೂಡ ಸಾರ್ವಜನಿಕ ಕೆಲಸ ಮಾಡಲು ಬಂದಿದ್ದೇನೆ, ಖಂಡಿತಾ ಮಾಡುತ್ತೇನೆಂದರು.

ಮನೆ ನಿರ್ಮಾಣ ವೇಳೆ ಸೆಟ್ ಬ್ಯಾಕ್ ಬಿಡಬೇಕೆಂಬ ನಿಯಮ ರಾಜ್ಯಾದ್ಯಂತ ಜಾರಿಯಲ್ಲಿದೆ. ಅದು ಕೇವಲ ಹಾಸನಕ್ಕೆ ಸೀಮಿತವಾದ ಸಮಸ್ಯೆಯಲ್ಲ. ಸಂಬಂಧಪಟ್ಟ ಮೇಲಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿದ್ದೇನೆ. ಆರಂಭದ ನಿಯಮಾವಳಿ ಸಡಿಲಗೊಳಿಸಲಾಗಿದೆ. ಈ ಸಂಬಂಧ ಸರ್ಕಾರದಿಂದ ಶೀಘ್ರ ಆದೇಶ ಹೊರ ಬೀಳಲಿದೆ. ನನ್ನೊಬ್ಬನ ಹಂತದಲ್ಲಿ ಆಗುವುದಿದ್ದರೆ ಧರಣಿ ಮಾಡಿಯಾದರೂ ಕೆಲಸ ಮಾಡಿಸುತ್ತಿದ್ದೆ ಎಂದರು.

## ಅಕ್ರಮ ಗೋ ಸಾಗಿಸುತ್ತಿದ್ದ ವಾಹನಕ್ಕೆ ತಡೆ: ಬಿಜೆಪಿ ಮುಖಂಡನಿಗೆ ಗಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಯಸಳೂರು ಪೊಲೀಸ್ ಠಾಣೆ ವ್ಯಾಪ್ತಿಯ ಚಿಕ್ಕಂದೂರು ಗ್ರಾಮದ ಅರಣ್ಯ ಪ್ರದೇಶದಲ್ಲಿ ಬೆಳ್ಳಂಬೆಳಿಗ್ಗೆ ಅನುಮಾನಾಸ್ಪದವಾಗಿ ಅತಿವೇಗದಲ್ಲಿ ಸಂಚರಿಸುತ್ತಿದ್ದ ಪಿಕಪ್ ವಾಹನವನ್ನು ಸ್ಥಳೀಯರು ತಡೆದು ಪರಿಶೀಲಿಸಿದ ವೇಳೆ, ನಿಯಮ ಉಲ್ಲಂಘಿಸಿ ಜಾನುವಾರು ಸಾಗಾಟ ಮಾಡಲಾಗುತ್ತಿದ್ದ ಪ್ರಕರಣ ಬೆಳಕಿಗೆ ಬಂದಿದೆ.

ಸ್ಥಳೀಯರ ಮಾಹಿತಿ ಮೇರೆಗೆ ಪಿಕಪ್ ಪರಿಶೀಲಿಸಿದಾಗ ಮೂರು ಹಸುಗಳನ್ನು ಯಾವುದೇ ಸುರಕ್ಷತಾ ಕ್ರಮಗಳನ್ನು ಪಾಲಿಸದೆ, ಪಶುವೈದ್ಯರ ಪ್ರಮಾಣಪತ್ರ ಹಾಗೂ ಗ್ರಾಮ ಪಂಚಾಯಿತಿ ಅನುಮತಿ ಇಲ್ಲದೆ ಅತ್ಯಂತ ಕ್ರೂರ ಹಾಗೂ ಅಮಾನವೀಯ ರೀತಿಯಲ್ಲಿ ಸಾಗಿಸಲಾಗುತ್ತಿತ್ತು. ವಾಹನ ಚಾಲಕನಾಗಿದ್ದ ಚೇತನ ಎಂಬಾತನನ್ನು ಸ್ಥಳದಲ್ಲೇ ವಿಚಾರಿಸಿದಾಗ, ಜಾನುವಾರು ಸಾಗಾಣಿಕೆಗೆ ಸಂಬಂಧಿಸಿದ ಯಾವುದೇ ದಾಖಲೆಗಳನ್ನು ಸಲ್ಲಿಸಲು



ಸಾಧ್ಯವಾಗಿಲ್ಲ ಎನ್ನಲಾಗಿದೆ. ಇದರಿಂದ ಅನುಮಾನಗೊಂಡ ಗ್ರಾಮಸ್ಥರು ವಾಹನವನ್ನು ಪೊಲೀಸ್ ಠಾಣೆಗೆ ಕೊಂಡೊಯ್ಯುವಂತೆ ಸೂಚಿಸಿದ್ದಾರೆ.

ಈ ವೇಳೆ ಸ್ಥಳಕ್ಕೆ ಬಂದಿದ್ದ ಬಿಜೆಪಿ ಮುಖಂಡ ಜಗ ಅವರು ವಾಹನವನ್ನು ತಡೆದು ವಿಡಿಯೋ ಚಿತ್ರೀಕರಣ ನಡೆಸುತ್ತಿದ್ದ ಸಂದರ್ಭದಲ್ಲಿ ಚಾಲಕ ಏಕಾಏಕಿ ವಾಹನ ಚಲಾಯಿಸಿಕೊಂಡು ಪರಾರಿಯಾಗಲು ಯತ್ನಿಸಿದ್ದಾನೆ ಎನ್ನಲಾಗಿದೆ.

ಈ ಘಟನೆಯಲ್ಲಿ ಜಗ ಅವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಸ್ಥಳೀಯವಾಗಿ ಚಿಕಿತ್ಸೆ ಪಡೆಯಲಾಗಿದೆ. ಬಳಿಕ ಚಾಲಕ ವಾಹನ ಸಮೇತ ಚಿಕ್ಕಂದೂರು ರಕ್ಷಿತ ಅರಣ್ಯ ಪ್ರದೇಶದೊಳಗೆ ತೆರಳಿ ಪರಾರಿಯಾಗಿದ್ದಾನೆ ಎಂದು ಹೇಳಲಾಗಿದೆ.

ಘಟನೆ ಕುರಿತು ಈಗಾಗಲೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಲಾಗಿದ್ದು, ಆರೋಪಿಯನ್ನು ಶೀಘ್ರ ಪತ್ತೆ ಹಚ್ಚಿ ಜಾನುವಾರುಗಳ ನಿಜವಾದ ಮಾಲೀಕರನ್ನು ಗುರುತಿಸಿ ಅವರಿಗೆ ಹಸ್ತಾಂತರಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಜೊತೆಗೆ ಜಾನುವಾರುಗಳನ್ನು ಕ್ರೂರವಾಗಿ ಸಾಗಿಸಿರುವುದು, ಅತಿವೇಗದ ಚಾಲನೆ ಹಾಗೂ ರಕ್ಷಿತ ಅರಣ್ಯ ಪ್ರದೇಶಕ್ಕೆ ಅಕ್ರಮ ಪ್ರವೇಶ ಸೇರಿದಂತೆ ಸಂಬಂಧಿತ ಕಾನೂನುಗಳಡಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ತಾಲೂಕಿನ ವಿವಿಧ ಭಾಗಗಳಲ್ಲಿ ಗೋಸಾಗಾಟ ಘಟನೆಗಳು ನಿರಂತರವಾಗಿ ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆ ಕಟ್ಟುನಿಟ್ಟಿನ ನಿಗಾ ವಹಿಸಬೇಕೆಂದು ಹಿಂದು ಹಿತರಕ್ಷಣಾ ವೇದಿಕೆಯ ಮುಖಂಡ ರಘು ಸಕಲೇಶಪುರ ಆಗ್ರಹಿಸಿದ್ದಾರೆ.

## ಗುತ್ತಿಗೆದಾರರು ಪರವಾನಗಿ ನವೀಕರಣ ಮಾಡಿಸಿಕೊಳ್ಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಅನಾರೋಗ್ಯ ಮತ್ತಿತರ ಕಾರಣಗಳಿಂದ ಗುತ್ತಿಗೆದಾರರು ಮೃತರಾದರೆ ಅವರ ಕುಟುಂಬಕ್ಕೆ 10 ಲ. ರೂ. ನೀಡಲಾಗುತ್ತಿದೆ. ಗುತ್ತಿಗೆದಾರರು ನಿರ್ಲಕ್ಷ್ಯ ಮಾಡದೆ ನಿಗದಿತ ಅವಧಿಯಲ್ಲಿ ಪರವಾನಗಿ ನವೀಕರಣ ಮಾಡಿಕೊಳ್ಳಬೇಕು ಸಸಎಂದು ಗುತ್ತಿಗೆದಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಎಸ್.ಬಿ.ಜಗದೀಶ್ ತಿಳಿಸಿದರು.



ಪಟ್ಟಣದ ಗುತ್ತಿಗೆದಾರರ ಸಂಘದ ಕಚೇರಿಯಲ್ಲಿ ಇತ್ತೀಚೆಗೆ ನಿಧನರಾದ ಉಲ್ಲೇನಹಳ್ಳಿ ಗ್ರಾಮದ ಪ್ರಥಮ ದರ್ಜೆ ಗುತ್ತಿಗೆದಾರ ಧರ್ಮಪ್ಪ ಕುಟುಂಬಸ್ಥರಿಗೆ 10 ಲಕ್ಷ ರೂ. ಆದೇಶ ಪತ್ರ ನೀಡಿ ಅವರು ಮಾತನಾಡಿ, ಮೊದಲು ಗುತ್ತಿಗೆದಾರರ ಕ್ಷೇಮನಿಧಿ 5 ಲಕ್ಷ ರೂ. ಇತ್ತು. ಆರ್.ಮಂಜುನಾಥ್ ರಾಜ್ಯಾಧ್ಯಕ್ಷರಾದ ಮೇಲೆ ಸರ್ಕಾರಕ್ಕೆ ಒತ್ತಡ ಹಾಕಿ 10 ಲಕ್ಷ ರೂ.ಗೆ ಹೆಚ್ಚಳ ಮಾಡಿದ್ದಾರೆ ಎಂದರು.

ತಾಲ್ಲೂಕಿನಲ್ಲಿ ನಾಲ್ಕು ತಿಂಗಳ ಹಿಂದೆ ಶ್ರವಣಬೆಳಗೊಳದ ಮೂರನೇ ದರ್ಜೆ ಗುತ್ತಿಗೆದಾರ ಅಶೋಕ್ ಮೃತರಾಗಿದ್ದು ಅವರ ಪತ್ನಿ ಗಾಯತ್ರಿಗೆ 10 ಲಕ್ಷ ರೂ. ಕ್ಷೇಮನಿಧಿಯಿಂದ ಕೊಡಿಸಲಾಗಿದೆ. ಜಿಲ್ಲೆಯಲ್ಲಿ ಸಾಕಷ್ಟು ವರ್ಷಗಳಿಂದ ಗುತ್ತಿಗೆದಾರರು ಸರ್ಕಾರದಿಂದ ಕಾಮಗಾರಿ ಪಡೆದು ಕೆಲಸ ಮಾಡಕೊಂಡು ಬಂದಿದ್ದಾರೆ. ಇತ್ತೀಚಿನ ದಿನಗಳಲ್ಲಿ ಕೆಲಸ ಇಲ್ಲದೆ ಇರುವುದರಿಂದ ತಮ್ಮ ಪರವಾನಗಿಯನ್ನು ನವೀಕರಣ ಮಾಡಿಸಿಲ್ಲ. ನಿರ್ಲಕ್ಷ್ಯ ಮಾಡದೆ ಪರವಾನಗಿ ನವೀಕರಣ ಮಾಡಿಸಿಕೊಳ್ಳಬೇಕು. 10 ವರ್ಷಕ್ಕೆ ಒಮ್ಮೆ ಮಾತ್ರ ನವೀಕರಣ ಮಾಡಲಾಗುತ್ತದೆ. ಹಾಗಾಗಿ ಯಾವುದೇ ಗುತ್ತಿಗೆದಾರರು ಅಸಡ್ಡೆ ತೋರಬಾರದು ಎಂದರು.

## ಆತ್ಮಹತ್ಯೆ ಪರಿಹಾರ ಯೋಜನೆಗಳು ಪ್ರಚಾರಕ್ಕಲ್ಲ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರೈತರ ಆತ್ಮಹತ್ಯೆ ಪರಿಹಾರ ಯೋಜನೆಯನ್ನು ಯಾವುದೇ ರೀತಿಯ ಪ್ರಚಾರಕ್ಕೆ ಬಳಸದೆ ಸಂಕಷ್ಟಕ್ಕೆ ಸಿಲುಕಿರುವ ಕುಟುಂಬಗಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವಾಗಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಕೃಷಿ ಇಲಾಖೆ ಆವರಣದಲ್ಲಿ ವಿವಿಧ ಫಲಾನುಭವಿಗಳಿಗೆ ಚೆಕ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರೈತರ ಆತ್ಮಹತ್ಯೆ, ಆಕಸ್ಮಿಕ ಮರಣ ಪ್ರಕರಣಗಳು ಹಾಗೂ ಬಣವೆ ನಷ್ಟ ಯೋಜನೆಗಳಡಿ ಸಂತ್ರಸ್ತ ಕುಟುಂಬಗಳಿಗೆ ಪರಿಹಾರಧನ ಸುಲಭವಾಗಿ ಮತ್ತು ವಿಳಂಬವಿಲ್ಲದೆ ತಲುಪುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಮೃತ ರೈತರ ವಾರಸುದಾರರು ಸಲ್ಲಿಸಬೇಕಾದ ದಾಖಲೆಗಳ ಕುರಿತು ಸ್ಪಷ್ಟ ಮಾಹಿತಿ ನೀಡಿ, ಅರ್ಜಿ ಸಲ್ಲಿಕೆ ಪ್ರಕ್ರಿಯೆಯನ್ನು ಮತ್ತಷ್ಟು ಸರಳಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಯಸಳೂರು ಹೋಬಳಿ ಸಂತಹಳ್ಳಿ ಗ್ರಾಮದ ಎಸ್.ಜಿ.ದಿವಾಕರ (ಗುಂಡಪ್ಪ ಅವರ ಪುತ್ರ) ಹಾಗೂ ಗೊದ್ದು ಗ್ರಾಮದ ಬಿ.ಕೆ.ತಿಪ್ಪೇಗೌಡ (ಕಾವೇರಿಗೌಡ ಅವರ ಪುತ್ರ) ಅವರ ಪ್ರಕರಣಗಳನ್ನು ಪರಿಶೀಲಿಸಿ, ಅರ್ಹ ಪ್ರಕರಣಗಳಿಗೆ ನಿಯಮಾನುಸಾರ ಪರಿಹಾರ ಮೊತ್ತ ಶಿಫಾರಸು ಮಾಡಲು ತೀರ್ಮಾನಿಸಲಾಯಿತು ಎಂದರು.

ಇದೇ ವೇಳೆ ರೈತರ ಆಕಸಿ ಕ ಮರಣ ಪ್ರಕರಣಗಳಾದ ಯಸಳೂರು ಹೋಬಳಿಯ ಕರಗೂರು ಗ್ರಾಮದ ಕೆ.ಎನ್. ಪ್ರಕಾಶ್ (ನಂಜೇಗೌಡ ಅವರ ಪುತ್ರ) ಹಾಗೂ ಹಾನುಬಾಳು ಹೋಬಳಿಯ ಚಿಗನಹಳ್ಳಿ ಗ್ರಾಮದ ನಂಜಯ್ಯ (ಕರಿಯಯ್ಯ ಅವರ ಪುತ್ರ) ಅವರ ಪ್ರಕರಣಗಳನ್ನೂ ಸಭೆಯಲ್ಲಿ ಪರಿಗಣಿಸಿ, ತಲಾ 2 ಲಕ್ಷ ರೂ. ಪರಿಹಾರ ಮಂಜೂರಾತಿಗೆ ಮುಂದಿನ ಕ್ರಮ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ ಎಂದು ಹೇಳಿದರು.

ಸಂತ್ರಸ್ತ ಕುಟುಂಬಗಳಿಗೆ ಪರಿಹಾರಧನ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಅಗತ್ಯ ದಾಖಲೆಗಳನ್ನು ಶೀಘ್ರವಾಗಿ ಸಂಗ್ರಹಿಸಿ, ಪ್ರಕರಣಗಳ ವಿಲೇವಾರಿಯನ್ನು ವೇಗಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕುಣಿಗನಹಳ್ಳಿ ಗ್ರಾಮ ಪಂಚಾಯಿತಿಯ ಸ್ವಂತ ಸಂಪನ್ಮೂಲದ ಶೇ. 25 ಅನುದಾನದಡಿ ಶವ ಸಂಸ್ಕಾರ ನೆರವು, ಇಬ್ಬರು ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ಒಬ್ಬ ಎಂ.ಎ. ವಿದ್ಯಾರ್ಥಿಯ ವ್ಯಾಸಂಗಕ್ಕೆ ಆರ್ಥಿಕ ಸಹಾಯ ನೀಡಿರುವುದಾಗಿ ಮಾಹಿತಿ ನೀಡಲಾಯಿತು.

ಸಕಲೇಶಪುರ ಉಪವಿಭಾಗದ ಕೃಷಿ ಉಪ ನಿರ್ದೇಶಕ ಪ್ರಭಾಕರ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಕಾಶ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಿರೀಶ್, ತೋಟಗಾರಿಕೆ ಇಲಾಖೆ ಸಹಾಯಕ ಅಧಿಕಾರಿ ಮನು, ಕೃಷಿ ಪರಿಕರಗಳ ಮಾರಾಟ ಸಂಘದ ಮಾಜಿ ಅಧ್ಯಕ್ಷ ಸಹನಾ ಶಶಿಧರ್ ಮತ್ತಿತರರಿದ್ದರು.

## ಯೋಗದಿಂದ ದೈಹಿಕ, ಮಾನಸಿಕ ಆರೋಗ್ಯ ವೃದ್ಧಿ: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಯೋಗಾಭ್ಯಾಸವು ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಪ್ರತಿಯೊಬ್ಬರೂ ನಿತ್ಯ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಲಯನ್ಸ್ ಸೇವಾ ಮಂದಿರದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗ ಚೇತನ ಟ್ರಸ್ಟ್ ಹಾಗೂ ಭಾರತೀಯ ಜನತಾ ಪಾರ್ಟಿ ವತಿಯಿಂದ ಆಯೋಜಿಸಿದ್ದ ಯೋಗ ಕಾರ್ಯಕ್ರಮದಲ್ಲಿ ಮಾತನಾಡಿದರು.

ಯೋಗವು ಭಾರತೀಯ ಸಂಸ್ಕೃತಿಯ



ಅಮೂಲ್ಯ ಕೊಡುಗೆಯಾಗಿದ್ದು, ದೇಹ, ಮನಸ್ಸು ಹಾಗೂ ಆತ್ಮದ ಸಮತೋಲನ ಸಾಧಿಸಲು ನೆರವಾಗುತ್ತದೆ. ಇಂದಿನ ಒತ್ತಡದ ಜೀವನಶೈಲಿಯಲ್ಲಿ ಆರೋಗ್ಯಕರ ಬದುಕನ್ನು ರೂಪಿಸಿಕೊಳ್ಳಲು ಯೋಗ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ವಿಶೇಷ ಪ್ರಯತ್ನದ ಫಲವಾಗಿ ವಿಶ್ವಸಂಸ್ಥೆಯು ಜೂನ್ 21 ಅನ್ನು ಅಂತಾರಾಷ್ಟ್ರೀಯ ಯೋಗ ದಿನವನ್ನಾಗಿ ಘೋಷಿಸಿದ್ದು, ಇದರಿಂದ ಯೋಗಕ್ಕೆ ಜಾಗತಿಕ ಮಟ್ಟದಲ್ಲಿ ಹೆಚ್ಚಿನ ಮಾನ್ಯತೆ ದೊರೆತಿದೆ. ಇಂದು ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಯೋಗಾಭ್ಯಾಸವನ್ನು ಅಳವಡಿಸಿಕೊಂಡು ಆರೋಗ್ಯಕರ ಜೀವನದತ್ತ ಜನರು ಸಾಗುತ್ತಿದ್ದಾರೆ ಎಂದರು.

ಯೋಗವು ಕೇವಲ ವ್ಯಾಯಾಮವಲ್ಲ, ಅದು ಜೀವನದ ಶಿಸ್ತು ಹಾಗೂ ಆರೋಗ್ಯದ ಮಾರ್ಗವಾಗಿದೆ. ನಿಯಮಿತ ಯೋಗಾಭ್ಯಾಸದಿಂದ ಅನೇಕ ಆರೋಗ್ಯ ಸಮಸ್ಯೆಗಳನ್ನು ದೂರವಿಡಲು ಸಾಧ್ಯ. ಯುವಜನತೆ ಸೇರಿದಂತೆ ಎಲ್ಲಾ ವಯೋಮಾನದವರು ಯೋಗವನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಯೋಗ ಚೇತನ ಟ್ರಸ್ಟ್ ಅಧ್ಯಕ್ಷ ಲಕ್ಷ್ಮೀ ರಂಗನಾಥ್ ಮಾತನಾಡಿ, ಟ್ರಸ್ಟ್ ವತಿಯಿಂದ ನಗರದಲ್ಲಿ ನಿರಂತರವಾಗಿ ಸಾರ್ವಜನಿಕರಿಗೆ ಯೋಗ ತರಬೇತಿ ನೀಡಲಾಗುತ್ತಿದೆ. ಅನೇಕರು ಯೋಗ ಕಲಿತು ಆರೋಗ್ಯ ಕಾಪಾಡಿಕೊಳ್ಳುತ್ತಿದ್ದಾರೆ. ಯೋಗವನ್ನು ಯಾವುದೇ ವಯಸ್ಸಿನವರು ಅಭ್ಯಾಸ ಮಾಡಬಹುದಾಗಿದ್ದು, ಯೋಗದ ಕುರಿತು ತಪ್ಪು ಕಲ್ಪನೆಗಳಿಗೆ ಅವಕಾಶ ನೀಡಬಾರದು ಎಂದರು.

ಈ ಸಂದರ್ಭದಲ್ಲಿ ವಿವಿಧ ಯೋಗಾಸನಗಳು ಹಾಗೂ ಪ್ರಾಣಾಯಾಮಗಳ ಮಹತ್ವದ ಕುರಿತು ವಿವರಿಸಲಾಯಿತು.

ಬಿಜೆಪಿ ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಅಗ್ನಿ ಸೋಮಶೇಖರ್, ಬಿಜೆಪಿ ಮುಖಂಡರಾದ ವಿನಯ್, ನವೀನ್ ಶೆಟ್ಟಿ, ಲೋಕೇಶ್, ಗಾಯತ್ರಿ, ಮದನ್, ಟ್ರಸ್ಟ್‌ನ ಸತ್ಯಣ್ಣ, ಬಸವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಟ್ರ್ಯಾಕ್ಟರ್ ಡಿಕ್ಕಿಯಾಗಿ ಮಹಿಳೆ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಟ್ರ್ಯಾಕ್ಟರ್ ಡಿಕ್ಕಿಯಾಗಿ ಬೈಕ್ ಹಿಂಬದಿ ಕುಳಿತಿದ್ದ ಮಹಿಳೆ ಅಸುನೀಗಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕು ಹುಲಿಕೆರೆ-ಗೌಡಗೆರೆ ಮಾರ್ಗಮಧ್ಯೆ ನಡೆದಿದೆ.

ಹಿರೀಸಾವೆ ಹೋಬಳಿ ಮದಲಗೆರೆ ಗ್ರಾಮದ ರತ್ನಮ್ಮ (68) ಮೃತರು. ಪುತ್ರ ಗಂಗಾಧರ್ ಜೊತೆಗೆ ತೆಂಕನಹಳ್ಳಿಗೆ ತೆರಳಿದ್ದ ಅವರು ಸಂಜೆ 6 ಗಂಟೆ ವೇಳೆ ವಾಪಸ್ ಬರುತ್ತಿದ್ದಾಗ ಅಪಘಾತ ಸಂಭವಿಸಿದೆ.

ನುಗ್ಗೇಹಳ್ಳಿ ಕಡೆಯಿಂದ ವೇಗವಾಗಿ ಬಂದ ಟ್ರ್ಯಾಕ್ಟರ್ ಚಾಲಕ ಏಕಾಏಕಿ ಬೈಕ್‌ಗೆ ಡಿಕ್ಕಿ ಮಾಡಿದ್ದಾನೆ.

ಬೈಕ್ ಸಮೇತ ಗಂಗಾಧರ್ ಹಾಗೂ ರತ್ನಮ್ಮ ಕೆಳಗೆ ಬಿದ್ದಿದ್ದು ತಲೆಗೆ ಬಲವಾದ ಪೆಟ್ಟು ಬಿದ್ದಿದ್ದ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ನುಗ್ಗೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾಡಾನೆ ಮೇಲೆ ನಿಗಾ ಇಡಲು ರೇಡಿಯೋ ಕಾಲರ್ ಜೊತೆ ಟ್ರಾನ್ಸಮಿಟರ್

## ಕಾಡಾನೆ ದಾಳಿಯಿಂದ ಮೂರು ವರ್ಷದಲ್ಲಿ 14 ಜನರ ಸಾವು | ಅವಘಡ ತಡೆಗೆ ಕಠಿಣ ಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆಗಳ ಚಲನವಲನ ಅರಿಯಲು ಇಷ್ಟು ದಿನಗಳ ವರೆಗೆ ರೇಡಿಯೋ ಕಾಲರ್ ಮೊರೆ ಹೋಗುತ್ತಿದ್ದ ಅರಣ್ಯ ಇಲಾಖೆ ಆಧುನಿಕತೆ ಕಂಡುಕೊಂಡಿದ್ದು ಟ್ರಾನ್ಸಮಿಟರ್ ಅಳವಡಿಕೆಗೆ ಮುಂದಾಗಿದೆ.

ರೇಡಿಯೋ ಕಾಲರ್‌ನಿಂದ ಕಾಡಾನೆ ಎಲ್ಲಿದೆ ಎಂಬ ಮಾಹಿತಿ ಅಷ್ಟೇ ಸಿಗುತ್ತಿತ್ತು. ಆದರೆ ಆಧುನಿಕವಾಗಿ ಪರಿಚಯಿಸಲ್ಪಟ್ಟಿರುವ ಟ್ರಾನ್ಸಮಿಟರ್ ರಿಸೀವರ್ ಅಳಡಿಸಿದರೆ ಕಾಡಾನೆ ಸುತ್ತಲಿನ ಅಂದಾಜು 400 ಮೀಟರ್ ಜಾಗವನ್ನು ನೋಡಬಹುದು. ರೆಡಿಯೋ ಕಾಲರ್‌ನ ಫಲಿತಾಂಶವು ಸ್ಯಾಟ್‌ಲೈಟ್ ಮೂಲಕ ಆನ್ ಲೈನ್ ಪೋರ್ಟಲ್‌ಗೆ ಬಿತ್ತರವಾಗುತ್ತದೆ. ಅದೇ ರೀತಿ ಟ್ರಾನ್ಸಮಿಟರ್ ರಿಸೀವರ್ ಸಹ ಆನೆ ಸುತ್ತಲಿನ ಜಾಗದ ಜೊತೆಗೆ ಧ್ವನಿಯನ್ನು ಕಳುಹಿಸಿಕೊಡುತ್ತದೆ. ಆನೆ ಇರುವ ಜಾಗದಲ್ಲಿ ಸೆರೆ ಕಾರ್ಯಾಚರಣೆಗೆ ಅವಕಾಶ ಇದೆಯೇ, ಕಲ್ಲು ಬಂಡೆ, ನೀರು, ಗಿಡಗಂಟಿಗಳಿರುವ ಜಾಗ ಅಥವಾ ಸಮತಟ್ಟು ಪ್ರದೇಶದಲ್ಲಿ ನಿಂತಿದೆಯೇ ಇಲ್ಲವೇ ಎಂಬುದನ್ನು ನೂತನ ತಂತ್ರಜ್ಞಾನ ನಿಖರವಾಗಿ ಹೇಳಲಿದೆ. ಹೆಜ್ಜೆ ಗುರುತು ಆಧರಿಸಿ ಪತ್ತೆ ಮಾಡಲು ನೆರವಾಗಲಿದೆ. ಈಗಾಗಲೇ ಎರಡು ಆನೆಗಳಿಗೆ ಟ್ರಾನ್ಸಮಿಟರ್ ಹಾಕಲಾಗಿದೆ. ಅದರ ಫಲಿತಾಂಶ ನೋಡಿಕೊಂಡು ಎಲ್ಲಾ ಗಂಡು ಕಾಡಾನೆಗಳಿಗೆ ಅಳವಡಿಸಲು ಚಿಂತನೆ ನಡೆದಿದೆ.

ಜಿಲ್ಲೆಯ ಬೇಲೂರು, ಆಲೂರು, ಸಕಲೇಶಪುರ, ಅರಕಲಗೂಡು ಭಾಗದಲ್ಲಿ ಕಾಡಾನೆಗಳ ಹಾವಳಿ ಹೆಚ್ಚಿದೆ. ಒಟ್ಟು 85 ರಿಂದ 90 ಆನೆಗಳು ಹೆಚ್ಚಿದ್ದು ಅದರಲ್ಲಿ 30ಕ್ಕೂ ಹೆಚ್ಚು ಆನೆಗಳು ಸಕಲೇಶಪುರ ತಾಲ್ಲೂಕಿನ ಯಸಳೂರು ಭಾಗದಲ್ಲಿ ಸಂಚರಿಸುತ್ತಿವೆ. ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿರುವ ಆನೆಗಳು ಆಗಾಗ ರಸ್ತೆ ದಾಟುತ್ತಾ ಸಾರ್ವಜನಿಕರಲ್ಲಿ ಭೀತಿಯುಂಟು ಮಾಡುತ್ತಿವೆ.



ಕಾಡಾನೆ ಹಾಗು ಮಾನವ ಸಂಘರ್ಷ ತಡೆಗೆ ಅರಣ್ಯ ಇಲಾಖೆ ಶಕ್ತಿ ಮೀರಿ ಶ್ರಮಿಸುತ್ತಿದೆ. ಜಿಲ್ಲೆಯಲ್ಲಿ 140 ಇಟಿಎಫ್ ಸಿಬ್ಬಂದಿ ಹೊರಗುತ್ತಿಗೆ ಆಧಾರದಡಿ ಕೆಲಸ ಮಾಡುತ್ತಿದ್ದು ಆನೆಗಳ ಚಲನವಲನಗಳ ಮೇಲೆ ನಿಗಾ ಇಟ್ಟಿದ್ದಾರೆ. 54 ಲಕ್ಷ ರೂ. ವೆಚ್ಚದಲ್ಲಿ 3 ಕ್ಯಾಂಪರ್ಸ್ ಹಾಗೂ 10 ಬೈಕ್‌ಗಳನ್ನು ಅರಣ್ಯ ಇಲಾಖೆಗೆ ನೀಡಲಾಗಿದೆ. ಜೊತೆಗೆ ಆನೆ ಸಂಚಾರ ಪ್ರದೇಶದ 35 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ.

ಕಾಡಾನೆಗಳ ದಾಳಿಗೆ 2023-24 ರಿಂದ 2026-27ರ ವರೆಗೆ 14 ಜನರು ಮೃತಪಟ್ಟಿದ್ದಾರೆ.

> ಕಾಡಾನೆ-ಮಾನವ ಸಂಘರ್ಷ ತಡೆಗೆ ಅರಣ್ಯ ಇಲಾಖೆ ಎಲ್ಲಾ ಕ್ರಮ ಕೈಗೊಂಡಿದೆ. ಆಲೂರು ಭಾಗದಲ್ಲಿ ಅಳವಡಿಸಿರುವ ರೈಲ್ವೆ ಬ್ಯಾರಿಕೇಡ್ ಗೇಟ್‌ಗಳನ್ನು ಸ್ಥಳೀಯರು ಮುರಿದು ಹಾಕುತ್ತಿದ್ದಾರೆ. ಹೀಗೆ ಮಾಡಿದರೆ ನಮ್ಮ ಪ್ರಯತ್ನದ ಜೊತೆಗೆ ಸರ್ಕಾರದ ಕೋಟ್ಯಂತರ ರೂಪಾಯಿ ವ್ಯಯವಾಗುತ್ತದೆ. ಸಾರ್ವಜನಿಕರು ನಮ್ಮೊಂದಿಗೆ ಸಹಕರಿಸಬೇಕು.
>
> – ಸೌರಬ್‌ಕುಮಾರ್, ಡಿಸಿಎಫ್

ಕಾಡಾನೆಗಳ ಜೊತೆಗೆ ಕರಡಿ, ಕಾಡುಕೋಣ, ಕಾಡು ಹಂದಿ ಉಪಟಳವು ಮಲೆನಾಡಿನ ಜನರ ನಿದ್ದೆಗೆಡಿಸಿದೆ.

ಕಳೆದ ಮೂರು ವರ್ಷಗಳಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಹಾನಿಗೀಡಾದ ಬೆಳೆ ಹಾಗೂ ಮೃತ ಕುಟುಂಬಕ್ಕೆ ಪರಿಹಾರ ಸೇರಿ ರಾಜ್ಯ ಸರ್ಕಾರ 15.16 ಕೋಟಿ ರೂ. ಬಿಡುಗಡೆ ಮಾಡಿದೆ.

2023ರಲ್ಲಿ 4.76 ಕೋಟಿ ರೂ., 2024ರಲ್ಲಿ 4.19 ಕೋಟಿ ರೂ., 2025ರಲ್ಲಿ 6.6 ಕೋಟಿ ರೂ. ಹಾಗು ಈ ವರ್ಷ 75 ಲಕ್ಷ ರೂ. ಪರಿಹಾರ ನೀಡಲಾಗಿದೆ. ಇನ್ನು 60 ಲಕ್ಷ ರೂ. ಪರಿಹಾರದ ದನ ಬಾಕಿ ಇದೆ. ಇಷ್ಟು ವರ್ಷಗಳ ಕಾಲ ಪರಿಹಾರ ಮೊತ್ತವನ್ನು ಖಜಾನೆಯಿಂದ ನೇರವಾಗಿ ನೀಡಲಾಗುತ್ತಿತ್ತು. ಇನ್ನು ಮುಂದೆ ಡಿಬಿಟಿ ಮೂಲಕ ಕೊಡುವ ವ್ಯವಸ್ಥೆ ಮಾಡಿಕೊಂಡಿದ್ದು ಫಲಾನುಭವಿಗಳು ಕಚೇರಿಗೆ ಅಲೆದಾಡುವುದು ತಪ್ಪಲಿದೆ.

## ಕಾಡಾನೆ ಸಂಚಾರ ನಿತ್ಯ ನಿರಂತರ

ಬೇಲೂರು, ಸಕಲೇಶಪುರ ಭಾಗದಲ್ಲಿ ಕಾಡಾನೆಗಳ ಉಪಟಳ ಮಿತಿಮೀರಿದ್ದು ಸಾರ್ವಜನಿಕರ ನೆಮ್ಮದಿಗೆ ಭಂಗ ಉಂಟಾಗಿದೆ. ಕಾಫಿ ತೋಟಗಳನ್ನೇ ಆವಾಸ ಸ್ಥಾನವಾಗಿಸಿಕೊಂಡಿರುವ ಆನೆಗಳು ಯಾವಾಗ ಬೇಕೆಂದಾಗ ರಸ್ತೆಗೆ ಬರುತ್ತವೆ. ಇಂತಹ ಸಮಯದಲ್ಲಿ ವಾಹನ ಸವಾರರು ಸಿಲುಕಿದರೆ ಅಪಾಯ ಕಟ್ಟಿಟ್ಟಬುತ್ತಿ. ಕಾಡಾನೆಗಳ ಸಂಚಾರದ ವಿಡಿಯೋಗಳು ನಿತ್ಯ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವುದು ಮಲೆನಾಡಿನ ಜನರ ಸಮಸ್ಯೆಗೆ ನಿದರ್ಶನವಾಗಿದೆ.

## ವಿಶ್ವಕ್ಕೆ ಯೋಗ ಪರಿಚಯಿಸಿದ ದೇಶ ಭಾರತ : ಬಿ.ಕೆ. ಗಂಗಾಧರ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತದ ಯೋಗ ನಮ್ಮ ಆಚಾರ ವಿಚಾರಗಳನ್ನು ವಿಶ್ವಕ್ಕೆ ಸಾರುತ್ತಿದ್ದು, ಯೋಗ ಮಾಡುವುದರಿಂದ ದೇಹ ಮತ್ತು ಮನಸ್ಸು ನಿಯಂತ್ರಣದಲ್ಲಿರುತ್ತದೆ ಎಂದು ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ಹೇಳಿದರು.

ನಗರದ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತಾರಾಷ್ಟ್ರೀಯ ಶಾಲೆಯಲ್ಲಿ ಈಚೆಗೆ ನಡೆದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರು ತಮಗಿರುವ 24 ಗಂಟೆಗಳ ಅವಧಿಯಲ್ಲಿ ಒಂದು ಗಂಟೆಯನ್ನು ಯೋಗ ಮಾಡುವುದಕ್ಕೆ ಮೀಸಲಾಗಿಡಬೇಕು. ಯೋಗ ಮಾಡುವುದರಿಂದ ಜೀವನದಲ್ಲಿ ಆತ್ಮಸ್ಥೈರ್ಯ ಬೆಳೆಸಿಕೊಳ್ಳಲು ಮಕ್ಕಳಿಗೆ ಸಹಕಾರಿಯಾಗಲಿದ್ದು, ಅದರೊಟ್ಟಿಗೆ ಸಕ್ಕರೆ ಕಾಯಿಲೆಯನ್ನು ನಿಯಂತ್ರಣದಲ್ಲಿ ಇಡುವ ಶಕ್ತಿ ಯೋಗಕ್ಕೆ ಇದೆ. ಮಕ್ಕಳು ಇಂದು ಟಿ.ವಿ., ಮೊಬೈಲ್‌ಗೆ ಹೆಚ್ಚಾಗಿ ಅಂಟಿಕೊಂಡು ದಿನದ ಹಲವು ಗಂಟೆಗಳು ಅದರಲ್ಲೆ ಕಳಿಯುತ್ತಿರುವುದರಿಂದ ಅನೇಕ ಕಾಯಿಲೆಗಳಿಗೆ ಗುರಿಯಾಗುತ್ತಿದ್ದಾರೆ. ಮಕ್ಕಳನ್ನು ಆರೋಗ್ಯವಂತರನ್ನಾಗಿ ಮಾಡಲು ನಮ್ಮ ಶಾಲೆಯಲ್ಲಿಯೇ ಯೋಗ ತರಬೇತಿ ಆರಂಭಿಸಲಾಗುತ್ತಿದ್ದು, ಪ್ರತಿಯೊಬ್ಬರು ಶಾಲೆಗಳಲ್ಲಿ ಇದನ್ನು ಕಡ್ಡಾಯ ಮಾಡಿದರೆ ಸಮಾಜಕ್ಕೆ ಉತ್ತಮ ಮಕ್ಕಳನ್ನು ನೀಡಬಹುದು. ಪ್ರತಿ ಮನೆಯಲ್ಲಿರುವ ಹಿರಿಯರು ಈ ಯೋಗದ ಬಗ್ಗೆ ಅರಿವು ಮೂಡಿಸಿಕೊಂಡು ತಾವು ಯೋಗ ಮಾಡುವುದರ ಜೊತೆ ಜೊತೆಗೆ ಮಕ್ಕಳಿಗೂ ಯೋಗ ಕಲಿಕೆಗೆ ಪ್ರೋತ್ಸಾಹಿಸಬೇಕು ಎಂದರು.

ಶಾಲೆಯ ಸುಮಾರು 1500 ಮಕ್ಕಳು ಯೋಗ ತರಬೇತಿ ಪಡೆದುಕೊಂಡರು. ಶಾಲೆಯ ಮುಖ್ಯ ಶಿಕ್ಷಕರು, ಶಿಕ್ಷಕರು ಹಾಗೂ ಇತರರು ಹಾಜರಿದ್ದರು.

# ಸ್ಕಾಲರ್ಸ್ ಶಾಲೆಯಲ್ಲಿ ಅರ್ಥಪೂರ್ಣ ಯೋಗ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ವಸ್ಥ ದೇಹದಲ್ಲಿ ಸ್ವಸ್ಥ ಮನಸ್ಸು ಎಂಬ ಮೌಲ್ಯಯುತ ಸಂದೇಶವನ್ನು ಸಾರುವ ಮೂಲಕ, ನಗರದ ಸ್ಕಾಲರ್ಸ್ ಶಾಲೆಯಲ್ಲಿ ವಿದ್ಯಾರ್ಥಿಗಳು ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಿದರು.

ವಿದ್ಯಾರ್ಥಿಗಳು ಸಾಮೂಹಿಕವಾಗಿ ಸೂರ್ಯ ನಮಸ್ಕಾರ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ವಿವಿಧ ರೀತಿಯ ಯೋಗಾಸನಗಳು ಹಾಗೂ ಧ್ಯಾನವನ್ನು ಮಾಡುವ ಮೂಲಕ ಯೋಗಾಭ್ಯಾಸದಲ್ಲಿ ಬದ್ಧತೆಯಿಂದ ಪಾಲ್ಗೊಂಡು ಗಮನ ಸೆಳೆದರು. ಈ ವೇಳೆ ಯೋಗದಿಂದಾಗುವ ದೈಹಿಕ ಮತ್ತು ಮಾನಸಿಕ ಪ್ರಯೋಜನಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಲಾಯಿತು.

ಯೋಗವು ಐದು ಸಾವಿರ ವರ್ಷಗಳ ಸುದೀರ್ಘ ಇತಿಹಾಸವಿರುವ ಭಾರತದ ಹೆಮ್ಮೆಯ ಪ್ರಾಚೀನ ಪರಂಪರೆಯಾಗಿದೆ. ಇಂದಿನ ಆಧುನಿಕ ಹಾಗೂ ಜಂಜಾಟದ ಜೀವನ ಶೈಲಿಯಿಂದ ಎದುರಾಗುವ ಹಲವಾರು ಆರೋಗ್ಯ ಸಮಸ್ಯೆಗಳಿಗೆ ಯೋಗವೇ ದಿವ್ಯೌಷಧಿಯಾಗಿದೆ. ನಿಯಮಿತವಾದ ಯೋಗಾಭ್ಯಾಸದಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುತ್ತದೆ. ಅದರಲ್ಲೂ ವಿಶೇಷವಾಗಿ ವಿದ್ಯಾರ್ಥಿ ದೆಸೆಯಲ್ಲಿ ಯೋಗವು ಏಕಾಗ್ರತೆ ಮತ್ತು ಸ್ಮರಣ ಶಕ್ತಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ವಿವರಿಸಲಾಯಿತು.

ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್ ಮಾತನಾಡಿ, ಯೋಗವು ಪ್ರತಿಯೊಬ್ಬರ ಜೀವಾಳ ಹಾಗೂ ಆರೋಗ್ಯಕ್ಕೆ ಸಂಜೀವಿನಿಯಾಗಿದೆ. ಮಕ್ಕಳು ಪ್ರತಿನಿತ್ಯ ಯೋಗಾಸನ ಮತ್ತು ಧ್ಯಾನವನ್ನು ತಮ್ಮ ದಿನಚರಿಯ ಒಂದು ಭಾಗವನ್ನಾಗಿ ಮಾಡಿಕೊಳ್ಳಬೇಕು. ನಿಯಮಿತವಾಗಿ ಯೋಗ ಮಾಡುವ ಮೂಲಕ ನಿರೋಗಿಗಳಾಗಿ ಹಾಗೂ ಸರ್ವತೋಮುಖವಾಗಿ ಸದೃಢರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಯೋಗಾಭ್ಯಾಸದಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದ ಶಾಲಾ ಮಕ್ಕಳು ಅತೀವ ಸಂತಸ ವ್ಯಕ್ತಪಡಿಸಿದರು. ಶಾಲೆಯ ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ವೀರಶೈವ ಲಿಂಗಾಯತ ಸಮಾಜ ಒಂದಾಗಬೇಕು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ವೀರಶೈವ ಲಿಂಗಾಯತ ಸಮಾಜದ ಸಂಘಟನೆಗೆ ಎಲ್ಲರೂ ಒಗ್ಗೂಡಿ ಕೆಲಸ ಮಾಡಬೇಕೆಂದು ದೊಡ್ಡಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.



ಪಟ್ಟಣದ ಬಸವೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮತ್ತು ತಾಲ್ಲೂಕು ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಶೈಕ್ಷಣಿಕ, ಸಾಮಾಜಿಕ, ರಾಜಕೀಯ ಸ್ಥಾನಮಾನ ಪಡೆಯಲು ವೀರಶೈವ ಲಿಂಗಾಯತ ಸಮುದಾಯ ಒಟ್ಟಾಗಿ ಹೋರಾಟ ನಡೆಸುವ ಅನಿವಾರ್ಯತೆ ಎದುರಾಗಿದೆ. ಜಿಲ್ಲೆಯಲ್ಲಿ ಒಬ್ಬ ಶಾಸಕರನ್ನು ಪಡೆಯಲು ನಮ್ಮಿಂದ ಸಾಧ್ಯವಾಗಿಲ್ಲ ಎಂಬುದು ಅದಕ್ಕೆ ನಿದರ್ಶನವಾಗಿದೆ. ಬಗರ್ ಹುಕುಂ ಸಾಗುವಳಿ ಜಮೀನು ಹಂಚಿಕೆಯಲ್ಲಿ ಅಧಿಕಾರಿಗಳ ಪಾತ್ರವಿದೆ. ಯಾರೋ ದೂರು ಕೊಟ್ಟಿದ್ದಾರೆ ಎನ್ನುವ ಕಾರಣ ಮುಂದಿಟ್ಟುಕೊಂಡು ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರನ್ನು ಸಿಐಡಿ ಅಧಿಕಾರಿಗಳು ವಶಕ್ಕೆ ಪಡೆದಿರುವುದು ಸರಿಯಲ್ಲ. ಜಿಲ್ಲೆಯ ಬಹುಸಂಖ್ಯಾತ ಸಮುದಾಯಕ್ಕೆ ರಕ್ಷಣೆ ಇಲ್ಲದಂತಾಗಿರುವುದು ಅತ್ಯಂತ ದುರದೃಷ್ಟಕರ ಸಂಗತಿಯಾಗಿದ್ದು ಮಹಾಸಭಾ ಒಕ್ಕೊರಲಿನಿಂದ ಖಂಡಿಸುತ್ತದೆ ಎಂದು ಹೇಳಿದರು.

# ಮೌಲ್ಯಾಧಾರಿತ ಶಿಕ್ಷಣ ನೀಡುವುದು ಸಂಸ್ಥೆಗಳ ಜವಾಬ್ದಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಗುಣಮಟ್ಟ ಮತ್ತು ಮೌಲ್ಯಾಧಾರಿತ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಪ್ರಮುಖ ಧ್ಯೇಯವಾಗಬೇಕು. ಹಣದ ಹಿಂದೆ ಹೋಗದ ಜನರ ವಿಶ್ವಾಸ ಗಳಿಸುವುದು ಮುಖ್ಯವಾಗುತ್ತದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಟೈಮ್ಸ್ ಪಿಯು ಕಾಲೇಜಿನ ವತಿಯಿಂದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ವಾಗತ ಕಾರ್ಯಕ್ರಮ ಹಾಗೂ 2025-26ನೇ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಶಿಕ್ಷಣದ ಜೊತೆ ವಿದ್ಯಾರ್ಥಿಗಳಲ್ಲಿ ಉತ್ತಮವಾದ ನಡತೆಯನ್ನು ರೂಢಿಸುವುದೇ ಶಿಕ್ಷಣ ಸಂಸ್ಥೆಗಳ ಮುಖ್ಯ ಗುರಿ. ಮಕ್ಕಳಲ್ಲಿ ಉತ್ತಮ ಗುಣವನ್ನು ಬೆಳೆಸುವುದು, ಚಾಣಾಕ್ಷತನ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುವುದು ಶಿಕ್ಷಣ ಸಂಸ್ಥೆಗಳ ಗುರಿಯಾಗಬೇಕು.



ಪ್ರತಿಯೊಬ್ಬ ನಾಗರಿಕನಿಗೂ ವಿದ್ಯಾಭ್ಯಾಸದ ಅವಶ್ಯಕತೆ ಇದೆ. ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಪೈಪೋಟಿ ಇದೆ. ಎಂಬಿಬಿಎಸ್ ಮಾತ್ರವಲ್ಲದೇ ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ರೇಡಿಯಾಲಜಿ, ಡಿ.ಫಾರ್ಮಾ, ಬಿ.ಪಾರ್ಮಾ ಸೇರಿ ಅನೇಕ ಕೋರ್ಸ್‌ಗಳಿದ್ದು, ಹೇರಳ ಉದ್ಯೋಗಾವಕಾಶ ಇದೆ. ತಮಗೆ ಸಿಕ್ಕ ಅವಕಾಶಗಳನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ನಿತ್ಯ ದಿನಪತ್ರಿಕೆ ಓದುವ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ಅದರಿಂದ ಬರೆಯುವ, ಮಾತನಾಡುವ ಕೌಶಲ ವೃದ್ಧಿಯಾಗುತ್ತದೆ. ಕೇವಲ ಪಠ್ಯ ಪುಸ್ತಕಗಳಿಗೆ ಸೀಮಿತವಾದರೆ ಯಶಸ್ಸು ಕಾಣುವುದು ಕಷ್ಟ. ಸಾಧನೆಯ ಕನಸು ಕಾಣುವ ವಿದ್ಯಾರ್ಥಿಗಳು ಪಠ್ಯದ ಹೊರತಾದ ಜ್ಞಾನವನ್ನು ಸಂಪಾದಿಸಬೇಕೆಂದು ಸಲಹೆ ನೀಡಿದರು.

ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ಮಾತನಾಡಿದರು.

ದ್ವಿತೀಯ ಪಿಯು ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಪ್ರಾಂಶುಪಾಲ ಎ.ಸಿ.ಸುನೀಲ್ ಕುಮಾರ್, ಉಪಪ್ರಾಂಶುಪಾಲ ಹೆಚ್.ಎಂ.ಶ್ರೀಕಂಠ, ಆಡಳಿತಾಧಿಕಾರಿ ಕೆ.ವಿ.ಸಂಜಯ್ ಮತ್ತಿತರರಿದ್ದರು.



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಅಷ್ಟಾಂಗ ಯೋಗ ಕೇಂದ್ರದಲ್ಲಿ (ಆದಿಚುಂಚನಗಿರಿ ಮಹಿಳಾ ಸಮಾಜ) ಭಾನುವಾರ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು. ಇದೇ ವೇಳೆ ನಾಲ್ವರು ಗಣ್ಯರಿಗೆ ಗೌರವ ಸಮರ್ಪಿಸಲಾಯಿತು. ಮಕ್ಕಳಾದ ತನಿಷ್ಕ, ಲೋಚನೆ, ಅಭಿ, ಆಗನ್ಯ ಮತ್ತು ನಿಸರ್ಗ ಯೋಗ ನೃತ್ಯ ಪ್ರದರ್ಶಿಸಿದರು. ಪಾಂಡು ಅವರು ಯೋಗ ಪ್ರದರ್ಶಿಸಿದರು. ಯೋಗ ಶಿಕ್ಷಕಿ ಕುಮುದ ಅಣ್ಣಯ್ಯ ಮತ್ತಿತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್-23

1757: ಪ್ಲಾಸಿ ಯುದ್ಧ ನಡೆಯಿತು. ಈ ಯುದ್ಧದಲ್ಲಿ ಬ್ರಿಟಿಷರು ಬಂಗಾಳದ ನವಾಬ್ ಸಿರಾಜ್-ಉದ್-ದೌಲಾ ಅವರನ್ನು ಸೋಲಿಸಿದರು. ಇದು ಭಾರತದಲ್ಲಿ ಬ್ರಿಟಿಷರ ಆಡಳಿತಕ್ಕೆ ಬುನಾದಿಯಾಯಿತು.

1980: ಭಾರತೀಯ ರಾಜಕಾರಣಿ ಸಂಜಯ್ ಗಾಂಧಿ ವಿಮಾನ ಅಪಘಾತದಲ್ಲಿ ನಿಧನರಾದರು.

1985: ಏರ್ ಇಂಡಿಯಾ ಟಿಕನಿಷ್ಕಟಿ ವಿಮಾನ ಸ್ಫೋಟ ದುರಂತ ಸಂಭವಿಸಿತು. ಈ ದುರಂತದಲ್ಲಿ 329 ಮಂದಿ ಮೃತಪಟ್ಟರು.

2016: ಬ್ರೆಕ್ಸಿಟ್ ಜನಮತ ಸಂಗ್ರಹ ನಡೆಯಿತು. ಬ್ರಿಟನ್ ಯುರೋಪಿಯನ್ ಒಕ್ಕೂಟದಿಂದ ಹೊರಬರಲು ಜನರು ಮತ ಚಲಾಯಿಸಿದರು.

**ಜನನ**

1937: ವಿ. ದಕ್ಷಿಣಾಮೂರ್ತಿ, ಖ್ಯಾತ ಸಂಗೀತ ನಿರ್ದೇಶಕ

1953: ಮೋಹನ್, ತಮಿಳು ಚಲನಚಿತ್ರ ನಟ

**ನಿಧನ**

1953: ಶ್ಯಾಮ ಪ್ರಸಾದ್ ಮುಖರ್ಜಿ, ಭಾರತೀಯ ಜನಸಂಘದ ಸಂಸ್ಥಾಪಕರಲ್ಲಿ ಒಬ್ಬರು

# ಸರ್ಕಾರಿ ಶಾಲೆಗಳಲ್ಲಿ ಅಡಗಿದೆ ದೇಶದ ಭವಿಷ್ಯ: ಕೆ.ಟಿ.ಜಯಶ್ರೀ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಸರ್ಕಾರಿ ಶಾಲೆಗಳೇ ದೇಶದ ಶೈಕ್ಷಣಿಕ ಆಸ್ತಿ. ದೇಶದ ಭವಿಷ್ಯ ಅಡಗಿರುವುದೇ ಸರ್ಕಾರಿ ಶಾಲೆಗಳಲ್ಲಿ ಎಂದು ಅನನ್ಯ ಟ್ರಸ್ಟ್ ಅಧ್ಯಕ್ಷೆ ಕೆ.ಟಿ. ಜಯಶ್ರೀ ಅಭಿಪ್ರಾಯಪಟ್ಟರು.

ತಾಲ್ಲೂಕಿನ ತಾಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅನನ್ಯ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ನೋಟ್ ಪುಸ್ತಗಳ ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿ, ಕೌಟುಂಬಿಕ, ಸಾಮಾಜಿಕ, ಸಾಂಸ್ಕೃತಿಕ ಮೌಲ್ಯಗಳು ಕುಸಿಯುತ್ತಿರುವ ಇಂದಿನ ಸಂದರ್ಭದಲ್ಲಿ ಮಕ್ಕಳಲ್ಲಿ ಜೀವನ ಮೌಲ್ಯಗಳನ್ನು ಬೆಳೆಸುವ ನಿಟ್ಟನಲ್ಲಿ ಶಿಕ್ಷಣ ಒತ್ತಾಸೆಯಾಗಿ ನಿಲ್ಲಬೇಕಿದೆ. ತಂದೆ, ತಾಯಿ, ಗುರು-ಹಿರಿಯರಿಗೆ ಗೌರವ ಕೊಡುವುದರ ಜೊತೆಗೆ ಸೇವಾ ಮನೋಭಾವನೆ ಬೆಳೆಸಿಕೊಳ್ಳಬೇಕಿದೆ ಎಂದರು.




ತಾಲ್ಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎಂ.ವರದರಾಜು ಮಾತನಾಡಿ, ಹಿಂದಿನ ಕಾಲದಲ್ಲಿ ಸೌಲಭ್ಯಗಳ ಕೊರತೆಯಿತ್ತು. ಹಾಗಾಗಿ ಶೈಕ್ಷಣಿಕ ಸ್ಥಿತಿಗತಿ ಕುಂಠಿತವಾಗಿರುತಿತ್ತು, ಆದರೆ ವರ್ತಮಾನದಲ್ಲಿ ಸರ್ಕಾರದಿಂದಲೇ ಪಠ್ಯಪುಸ್ತಕ, ಶೂ-ಸಾಕ್ಸ್, ಕ್ಷೀರಭಾಗ್ಯ, ಸಮವಸ್ತ್ರ, ಬಿಸಿಯೂಟ, ವಿದ್ಯಾರ್ಥಿ ವೇತನ ಸೇರಿ ಹಲವಾರು ಸೌಲಭ್ಯಗಳನ್ನು ಒದಗಿಸುತ್ತಿದೆ. ಕೆಲವು ಪೋಷಕರಿಗೆ ಸಮಯಕ್ಕೆ ಸರಿಯಾಗಿ ನೋಟ್ ಬುಕ್ಸ್ ಕೊಡಿಸುವುದು ಕಷ್ಟವಾಗುತ್ತಿದೆ. ಆದ್ದರಿಂದ ಕೆಲವು ದಾನಿಗಳನ್ನು ಸಂಪರ್ಕಿಸಿ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ಒದಗಿಸಿಕೊಡುತ್ತಿದ್ದೇವೆ. ಮಕ್ಕಳು ಸದ್ಬಳಕೆ ಮಾಡಿಕೊಳ್ಳುವುದರ ಮೂಲಕ ಜ್ಞಾನಾರ್ಜನೆ ಹೆಚ್ಚಿಸಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಮುಖ್ಯ ಶಿಕ್ಷಕ ಕೊಟ್ರೇಶ್ ಎಸ್. ಉಪ್ಪಾರ್, ಹಿರಿಯ ಶಿಕ್ಷಕಿ ವಿ.ರವಿತ, ಅನನ್ಯ ಟ್ರಸ್ಟ್‌ನ ಸದಸ್ಯರಾದ ಪಾರ್ವತಮ್ಮ, ಪಂಕಜ ಮತ್ತಿತರರಿದ್ದರು.

# ಶಿವಲಿಂಗೇಗೌಡರಿಗೆ ಮಂತ್ರಿ ಸ್ಥಾನಕ್ಕಾಗಿ ಸವಿತಾ ಸಮಾಜ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಶೋಷಿತ ವರ್ಗಗಳು ಹಾಗೂ ಹಿಂದುಳಿದ ಸಮುದಾಯಗಳ ಬಗ್ಗೆ ಕಳಕಳಿ ಹೊಂದಿರುವ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಮಂತ್ರಿ ಸ್ಥಾನ ದೊರೆತರೆ ಮೈಸೂರು ಭಾಗದಲ್ಲೂ ಪಕ್ಷ ಸಂಘಟನೆಗೆ ಶಕ್ತಿ ಬರಲಿದೆ. ಈ ನಿಟ್ಟಿನಲ್ಲಿ ಹೈಕಮಾಂಡ್ ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಯೋಚಿಸಬೇಕು ಎಂದು ಜಿಲ್ಲಾ ಸವಿತಾ ಸಮಾಜದ ಉಪಾಧ್ಯಕ್ಷ ವಿಜಯ್ ಕುಮಾರ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸತತ ನಾಲ್ಕು ಬಾರಿ ದಾಖಲೆ ಬಹುಮತಗಳೊಂದಿಗೆ ಕ್ಷೇತ್ರದ ಶಾಸಕರಾಗಿ ಆಯ್ಕೆಯಾಗುತ್ತಾ ಬಂದಿರುವ ಶಿವಲಿಂಗೇಗೌಡರು ಕ್ಷೇತ್ರವನ್ನು ಇಂದು ರಾಜ್ಯದಲ್ಲೇ ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿ ಮಾಡಿದ್ದಾರೆ .




ಇವರ ಕಾರ್ಯವೈಖರಿ ಇತರ ಶಾಸಕರಿಗೂ ಮಾದರಿಯಾಗಿದೆ. ಇಂತಹ ಜನಪರ ಕಾಳಜಿ ಹೊಂದಿರುವ, ರೈತರು ಕೂಲಿ ಕಾರ್ಮಿಕರು ಬಡವರ ನೋವು-ನಲಿವುಗಳನ್ನು ಹತ್ತಿರದಿಂದ ಬಲ್ಲವರಾಗಿರುವುದರಿಂದ ಇವರಿಗೆ ನೀಡುವ ಯಾವುದೇ ಖಾತೆಯನ್ನಾದರೂ ಯಶಸ್ವಿಯಾಗಿ ನಿಭಾಯಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅರಸೀಕೆರೆ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿದ್ದ ಯಾವೊಬ್ಬ ಶಾಸಕರಿಗೂ ಇಲ್ಲಿಯವರೆಗೂ ಸಚಿವರಾಗುವ ಅವಕಾಶ ದೊರೆಯದೆ ಇರುವುದು ಕ್ಷೇತ್ರದ ಜನತೆಯ ಅಸಮಾಧಾನವಾಗಿದೆ. ಅಲ್ಲದೆ ಕಳೆದ ವಿಧಾನಸಭೆ ಚುನಾವಣೆಯ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್ ಅವರು ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಿವಲಿಂಗೇಗೌಡರಿಗೆ ಈ ಬಾರಿ ಸಚಿವ ಸ್ಥಾನ ನೀಡುವುದಾಗಿ ಬಹಿರಂಗ ಸಭೆಯಲ್ಲಿ ಭರವಸೆ ನೀಡಿದ್ದು ಆ ಭರವಸೆಯನ್ನು ಈಡೇರಿಸುವಂತೆ ತಾವು ಒತ್ತಾಯಿಸುವುದಾಗಿ ಹೇಳಿದರು.

ಖಜಾಂಚಿ ರಾಜು ಮಾತನಾಡಿ, ಸತತವಾಗಿ ನಾಲ್ಕನೇ ಬಾರಿಗೆ ಶಾಸಕರಾಗಿ ಎರಡು ಬಾರಿ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರಾಗಿ ತಮಗೆ ದೊರೆತಿರುವ ಅವಕಾಶವನ್ನು ಜನರ ಸೇವೆಗೆ ಬಳಸಿಕೊಂಡಿರುವ ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ಸಿಕ್ಕಿದರೆ ರಾಜ್ಯದ ಜನತೆಗೆ ನ್ಯಾಯ ಒದಗಿಸುವುದಲ್ಲದೆ ಪಕ್ಷ ಸಂಘಟನೆಗೂ ಶಕ್ತಿ ತುಂಬುವುದರಲ್ಲಿ ಸಂದೇಹವಿಲ್ಲ ಎಂದು ಹೇಳಿದರು.

ತಾಲ್ಲೂಕು ಸವಿತಾ ಸಮಾಜದ ಗೌರವಾಧ್ಯಕ್ಷ ನಾರಾಯಣಸ್ವಾಮಿ, ಮುಖಂಡರಾದ ರಾಜುಮಣಿ, ಧರ್ಮ, ನಾಗೇಂದ್ರ, ನಾಗರಾಜ್, ರಘು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಎಸ್‌ಐಆರ್ ಪ್ರಕ್ರಿಯೆ ಗಂಭೀರವಾಗಿ ಪರಿಗಣಿಸಿ

ಸಕಲೇಶಪುರ: ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವುದು ಅಗತ್ಯವಾಗಿದ್ದು, ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕೆಂದು ಮಾಜಿ ಶಾಸಕ ಹೆಚ್. ಕೆ.ಕುಮಾರಸ್ವಾಮಿ ಹೇಳಿದರು.

ತಾಲ್ಲೂಕಿನ ಬಾಳ್ಳುಪೇಟೆಯ ಕೆಂಚಮ್ಮ ಮಲ್ಲೇಗೌಡ ಕಲ್ಯಾಣ ಮಂಟಪದಲ್ಲಿ ಜಾತ್ಯತೀತ ಜನತಾದಳ (ಜೆಡಿಎಸ್) ವತಿಯಿಂದ ಆಯೋಜಿಸಿದ್ದ ಸಕಲೇಶಪುರ ವಿಧಾನಸಭಾ ಕ್ಷೇತ್ರದ ಬಿಎಲ್‌ಎ-2 ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ಯಾವುದೇ ಚುನಾವಣೆಯ ಮೂಲ ಆಧಾರವಾಗಿದ್ದು, ಅದರ ನಿಖರತೆ ಕಾಪಾಡುವುದು ಬೂತ್ ಮಟ್ಟದ ಕಾರ್ಯಕರ್ತನ ಜವಾಬ್ದಾರಿ ಎಂದು ತಿಳಿಸಿದರು.

ಬೂತ್ ಮಟ್ಟದ ಪ್ರತಿನಿಧಿಗಳು ತಮ್ಮ ವ್ಯಾಪ್ತಿಯ ಪ್ರತಿಯೊಂದು ಮನೆಗೂ ಭೇಟಿ ನೀಡಿ ಮತದಾರರ ಮಾಹಿತಿ ಪರಿಶೀಲಿಸಬೇಕು. ಹೊಸದಾಗಿ ಮತದಾನದ ಅರ್ಹತೆ ಪಡೆದ ಯುವಕರ ಹೆಸರು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸುವುದು, ಸ್ಥಳಾಂತರಗೊಂಡಿರುವ ಅಥವಾ ತಿದ್ದುಪಡಿ ಅಗತ್ಯವಿರುವ ಮತದಾರರ ವಿವರಗಳನ್ನು ಸರಿಪಡಿಸುವ ಕಾರ್ಯವನ್ನು ನಿರ್ವಹಿಸಬೇಕು ಎಂದು ಹೇಳಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248